# ಮಾಸ ಭವಿಷ್ಯ

ಅರುಣ ಪಿ. ಭಟ್



**ಮೇಷ:** ತಿಂಗಳ ಆರಂಭದಲ್ಲಿ ಕಾರ್ಯಸಿದ್ಧಿ ಬಂಧುಗಳ ಆಗಮನದಿಂದ ಕುಟುಂಬದಲ್ಲಿ ಸಂತಸ ಧನಲಾಭ. ರಾಜಕೀಯದವರಿಗೆ ಅಧಿಕಾರ ಪ್ರಾಪ್ತಿ. ಗ್ರಂಥರಚನೆಯಲ್ಲಿ ಆಸಕ್ತಿ ವಾಹನ ಸೌಖ್ಯ. ಮಕ್ಕಳಿಂದ ಮಾನಸಿಕ ಕಿರಿಕಿರಿ. ಬರತಕ್ಕ ಬಾಕಿ ಬರುವುದು. ಶುಭ: 6, 18, 22 ಅಶುಭ: 10, 14, 27.



**ವೃಷಭ:** ತಿಂಗಳ ಪ್ರಾರಂಭದಲ್ಲಿ ಪ್ರವಾಸದಿಂದ ಸಂತಸ. ಸಹೋದರಿಯರಿಂದ ಶುಭವಾರ್ತೆ. ಗೃಹಾಲಂಕಾರ ವಸ್ತು ಖರೀದಿ. ತಿಂಗಳ ಮಧ್ಯದಲ್ಲಿ ಜ್ವರ ಪೀಡೆ ವೈದ್ಯಕೀಯ ಖರ್ಚು. ಕೋರ್ಟ್ ಪ್ರಕರಣದಲ್ಲಿ ಗೆಲುವು ಸಾಧ್ಯತೆ. ಅವಮಾನಕರ ಪ್ರಸಂಗ ಎದುರಾಗುವ ಸಂಭವ. ಶುಭ: 12, 20, 29 ಅಶುಭ: 11, 21, 25.



**ಮಿಥುನ:** ದೈಹಿಕ ಜಾಡ್ಯ, ಅಲರ್ಜಿ. ವಿನಾಕಾರಣ ಹೆದರಿಕೆ. ಆದರೆ, ಬಹುದಿನಗಳ ನಂತರ ಕುಟುಂಬದಲ್ಲಿ ಸಂತೋಷದ ಸಮಾರಂಭ. ಕಲಾವಿದರು ಮತ್ತು ವಿದ್ಯಾರ್ಥಿಗಳಿಗೆ ಪರೀಕ್ಷೆಯಲ್ಲಿ ಯಶಸ್ಸು. ಮಾನ ಸನ್ಮಾನ. ಮೂತ್ರ ಜನಕಾಂಗ ಪೀಡೆ ಸಾಧ್ಯತೆ. ಶುಭ: 14, 19, 22 ಅಶುಭ: 12, 17, 21.



**ಕರ್ಕ:** ಮನೆಕಟ್ಟುವ ಸಮಸ್ಯೆ ಬಗೆಹರಿಯುವುದು. ಕ್ರಯ ವಿಕ್ರಯದಲ್ಲಿ ವಂಚನೆ ನಡೆಯುವ ಸಂಭವ, ಜಾಗ್ರತೆ ಮುಖ್ಯ. ಒಂದಿಲ್ಲೊಂದು ವಿವಾದದಲ್ಲಿ ಸಿಲುಕುವಿರಿ. ತಂದೆಯಿಂದ ಹಣಕಾಸಿನ ಸಹಾಯ ಸಾಧ್ಯತೆ. ಕಾಲಿಗೆ ನೋವು. ಆಸ್ಪತ್ರೆಗೆ ಖರ್ಚು. ನಿರೀಕ್ಷಿತ ಸ್ಪರ್ಧೆಯಲ್ಲಿ ಯಶಸ್ಸು. ಶುಭ: 08, 16, 24 ಅಶುಭ: 12, 18, 26.



**ಸಿಂಹ:** ಶಾರೀರಿಕ ಮಾನಸಿಕ ಉತ್ಸಾಹ ವೃದ್ಧಿಸುವುದು. ಸರಕಾರಿ ಕೆಲಸಗಳು ತ್ವರಿತ ಗತಿಯಲ್ಲಿ ನಡೆಯುವುದು. ಪರಿಚಿತ ಸ್ತ್ರೀ ವಿರೋಧ ಕಾಣಿಸುವುದು. ಪಶುಗಳ ವಿಕ್ರಯದಾರರಿಗೆ ಲಾಭ. ಹೊಟ್ಟೆನೋವು ಕಾಣಿಸಿಕೊಳ್ಳಬಹುದು. ಅಜ್ಞಾತವಾಸದಿಂದ ಬಿಡುಗಡೆ. ಮಹತ್ವದ ಮಾತುಕತೆ. ಶುಭ: 14, 18, 23 ಅಶುಭ: 12, 16, 23.



**ಕನ್ಯಾ:** ಅನಿರೀಕ್ಷಿತ ಖರ್ಚಿನ ಪ್ರಸಂಗ ಎದುರಾಗಬಹುದು. ಸರಕಾರಿ ಕೆಲಸದಲ್ಲಿ ವ್ಯತ್ಯಯ ಕಂಡುಬರುವ ಸಾಧ್ಯತೆ. ಸೇವಕರಿಂದ ಹಾನಿ, ತೊಂದರೆ. ಬಂಧುಗಳಿಗೆ ಆಪತ್ತು. ಮನೆಕೆಲಸ ಅರ್ಧಕ್ಕೆ ನಿಲ್ಲುವುದು. ಪ್ರೇಮ ಪ್ರಸಂಗಗಳಲ್ಲಿ ಭಗ್ನತೆ. ಅಧಿಕಾರಿಗಳಿಗೆ ಹಿನ್ನಡೆ. ಶುಭ: 16, 22, 26 ಅಶುಭ: 11, 21, 27.



**ತುಲಾ:** ಉತ್ತಮ ಫಲ ಪ್ರಾಪ್ತಿಯ ರಾಶಿ. ವಿವಿಧ ಮೂಲಗಳಿಂದ ಆಕಸ್ಮಿಕ ಧನಲಾಭ ಉಂಟಾಗಬಹುದು. ನಿರುದ್ಯೋಗಿಗಳಿಗೆ ಉದ್ಯೋಗ ಸಿಗುವುದು. ಸಂತತಿ ಇಲ್ಲದವರಿಗೆ ಸಂತತಿಯ ಸೂಚನೆ. ವಿವಾಹಾಪೇಕ್ಷಿಗಳಿಗೆ ಸಂಗಾತಿ ಲಭ್ಯ. ವ್ಯಾಪಾರದಲ್ಲಿ ಲಾಭ. ಕುಟುಂಬ ಸೌಖ್ಯ. ಶುಭ: 14, 18, 21 ಅಶುಭ: 15, 19, 22.



**ವೃಶ್ಚಿಕ:** ಕಷ್ಟದಲ್ಲೂ ಇಷ್ಟ ಫಲ ಪ್ರಾಪ್ತಿಯಾಗುವುದು. ವಿದೇಶಿ ಪ್ರವಾಸಕ್ಕೆ ಸಿದ್ಧತೆ ನಡೆಯುವುದು. ಸರಕಾರಿ ಅಧಿಕಾರ ಪ್ರಾಪ್ತಿಯೋಗ. ಶಿಕ್ಷಕರಿಗೆ ಪದೋನ್ನತಿಯೊಡನೆ ವರ್ಗಾವಣೆ ಸಂಭವ. ಕುಟುಂಬ ವರ್ಗದಲ್ಲಿ ಅನಾರೋಗ್ಯ, ಅಪಾಯದ ಭೀತಿ. ಶುಭ: 16, 18, 20 ಅಶುಭ: 12, 21, 27.




**ಧನು:** ಆರೋಗ್ಯದಲ್ಲಿ ಏರುಪೇರು. ಹೆಂಡತಿಯೊಡನೆ ಜಗಳ. ಕಚೇರಿ ಕಾಗದ ಪತ್ರಗಳು ಹಠಾತ್ ಕಾಣೆಯಾಗಬಹುದು. ಜೋಪಾನವಾಗಿಟ್ಟುಕೊಳ್ಳಿ. ದೈನಂದಿನ ಕೆಲಸಗಳು ಸರಾಗ. ಸ್ತ್ರೀ ಮೂಲಕ ದ್ರವ್ಯ ಲಾಭ. ಮನೆಯಲ್ಲಿ ದೇವತಾ ಪೂಜೆ ನಡೆಯುವುದು. ಶುಭ: 12, 16, 18 ಅಶುಭ: 17, 19, 22.



**ಮಕರ:** ವಾಹನ ಚಲಾಯಿಸುವಾಗ ಎಚ್ಚರಿಕೆ ಇರಲಿ. ಕಾಲು ನೋವಿನ ಸಮಸ್ಯೆ. ಕೌಟುಂಬಿಕ ಖರ್ಚು ಜಾಸ್ತಿಯಾಗುವುದು. ಶತ್ರುಗಳು ತಲೆ ತಗ್ಗಿಸುವರು. ಹಳೆಯ ಮಿತ್ರರ ಆಗಮನ. ಮಕ್ಕಳಿಂದ ಶುಭವಾರ್ತೆ. ದಾಂಪತ್ಯ ಸೌಖ್ಯ. ಹಣಕಾಸಿನ ಲಭ್ಯತೆ. ಶುಭ: 14, 16, 19 ಅಶುಭ: 15, 19, 24.



**ಕುಂಭ:** ಪ್ರಾರಂಭದಿಂದಲೂ ಶುಭಯೋಗ. ಯಾಂತ್ರಿಕ ವಸ್ತುಗಳ ಖರೀದಿ. ಶೈಕ್ಷಣಿಕ ಕ್ಷೇತ್ರದವರಿಗೆ ತಾತ್ಕಾಲಿಕ ಬಡ್ತಿ. ಬ್ಯಾಂಕ್ ನೌಕರರಿಗೆ ವರ್ಗಾವಣೆ ಸಂಭವ. ಕೈಗೊಂಡ ಕೆಲಸಗಳಲ್ಲಿ ನಿರೀಕ್ಷೆಗಿಂತ ಹೆಚ್ಚಿನ ಲಾಭ. ಮಿತ್ರರಿಂದ ವಂಚನೆ ಸಂಭವ. ಮಕ್ಕಳ ಅನಾರೋಗ್ಯದಿಂದ ಬೇಸರ. ಶುಭ: 13, 19, 20 ಅಶುಭ: 14, 16, 25.



**ಮೀನ:** ವಿನಾಕಾರಣ ಮಿತ್ರರು ಶತ್ರುಗಳಾಗುವರು. ಮೇಲಧಿಕಾರಿಗಳಿಂದ ಕಿರಿಕಿರಿ. ಕಲಾವಿದರಿಗೆ, ಸಂಗೀತಗಾರರಿಗೆ ತಿಂಗಳ ಮೊದಲರ್ಧ ಉತ್ತಮ. ವಿದ್ಯಾರ್ಥಿಗಳಿಗೆ ಅಭ್ಯಾಸದಲ್ಲಿ ಹಿನ್ನಡೆ. ವಾಹನ ಚಾಲಕರಿಗೆ ಎಚ್ಚರ ಅಗತ್ಯ. ಕುಟುಂಬ ಸೌಖ್ಯ. ಶುಭ: 04, 10, 21 ಅಶುಭ: 12, 22, 27.